# ಕರ್ನಾಟಕ ವಿಧಾನ ಪರಿಷತ್

1. ಸದಸ್ಯರ ಹೆಸರು : ಡಾ: ತಳವಾರ್ ಸಾಬಣ್ಣ
(ನಾಮ ನಿರ್ದೇಶನ ಹೊಂದಿದವರು)

2. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1047 (1265)

3. ಉತ್ತರಿಸಬೇಕಾದ ದಿನಾಂಕ : 29-12-2022

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಪಂಚಾಯಿತಿಗಳಲ್ಲಿ ನಕಲು ಜಾಬ್‌ಕಾರ್ಡ್‌ಗಳನ್ನು ಸೃಷ್ಟಿಸಿ ಹಣ ದೋಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಪ್ರಸ್ತುತ ಜಾಬ್‌ಕಾರ್ಡ್ಗಳನ್ನು ಪಡೆಯಲು ವ್ಯಕ್ತಿಗಳು ಆಧಾರ್ ಸಂಖ್ಯೆ ಮತ್ತು ವೈಯಕ್ತಿಕ ಬ್ಯಾಂಕ್ ಖಾತೆ ಹೊಂದಿರುವುದು ಕಡ್ಡಾಯವಾಗಿರುತ್ತದೆ. ಆಧಾರ್ ಸಂಖ್ಯೆ ಹೊಂದಿಲ್ಲದೆ ಇರುವ ವ್ಯಕ್ತಿಗಳ ಹೆಸರಿನಲ್ಲಿ ಹಾಜರಾತಿ ಪಟ್ಟಿ (Nominal Muster Roll) ಸೃಜನೆ ಮಾಡಲು ನರೇಗಾ ತಂತ್ರಾಂಶವು ಅವಕಾಶ ಮಾಡಿಕೊಡುವುದಿಲ್ಲ. ಹಾಜರಾತಿ ಪಟ್ಟಿ ಸೃಜನೆ ಮಾಡದೆ ಯಾವುದೇ ವ್ಯಕ್ತಿಯ ಹೆಸರಿನಲ್ಲಿ ಹಣ ಪಾವತಿಸುವುದು ಸಾಧ್ಯವಿಲ್ಲ. ಆದ್ದರಿಂದ ಯೋಜನೆಯಡಿ ನಕಲಿ ಜಾಬ್‌ಕಾರ್ಡ್‌ಗಳನ್ನು ಸೃಷ್ಟಿಸಿ, ಹಣ ದುರುಪಯೋಗ ಪಡಿಸಿಕೊಳ್ಳಲು ಅವಕಾಶವಿರುವುದಿಲ್ಲ.<br>ಈ ಹಿಂದೆ ಬೆಳಗಾವಿ ಜಿಲ್ಲೆಯಲ್ಲಿ ಒಂದು ಚಿತ್ರದುರ್ಗ ಜಿಲ್ಲೆಯಲ್ಲಿ ಎರಡು ನಕಲಿ ಜಾಬ್ ಕಾರ್ಡ್ ಸೃಜನೆ ಮಾಡಿ ಹಣ ದುರುಪಯೋಗಪಡಿಸಿಕೊಂಡ ಪ್ರಕರಣಗಳು ವರದಿಯಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸುವ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ. |
| (ಆ) | ಕಾರ್ಮಿಕರನ್ನು ಬಳಸದೆ ಯಂತ್ರೋಪಕರಣಗಳ ನೆರವಿನಿಂದ ಕಾಮಗಾರಿ ನಡೆಸಿ ಹಣ ದೋಚುತ್ತಿರುವುದಕ್ಕೆ ಸರ್ಕಾರದಿಂದ ಏನು ಕ್ರಮ ಕೈಗೊಳ್ಳಲಾಗಿದೆ; | ನರೇಗಾ ಯೋಜನೆಯ ಕಾಮಗಾರಿಗಳನ್ನು ಕೂಲಿ ಕಾರ್ಮಿಕರ ಬದಲಾಗಿ ಯಂತ್ರೋಪಕರಣಗಳನ್ನು ಬಳಸಿ ಅನುಷ್ಠಾನಗೊಳಿಸಿರುವ 18 ಪ್ರಕರಣಗಳು ರಾಮನಗರ ಜಿಲ್ಲೆಯಲ್ಲಿ ವರದಿಯಾಗಿದ್ದು, ಓಂಬುಡ್ಸ್‌ಮನ್ ತನಿಖೆ ನಡೆಸಿ 18 ಪ್ರಕರಣಗಳಲ್ಲಿ ವಸೂಲಾತಿಗೆ ಸೂಚಿಸಲಾಗಿರುತ್ತದೆ. ಇವುಗಳ ಪೈಕಿ 5 ಪ್ರಕರಣಗಳು ಓಂಬುಡ್ಸ್‌ಮನ್ ಮೇಲ್ಮನವಿ ಪ್ರಾಧಿಕಾರದಲ್ಲಿ ವಜಾಗೊಂಡಿದ್ದು, 3 ಪ್ರಕರಣಗಳು ಪ್ರಾಧಿಕಾರದಲ್ಲಿ ವಿಚಾರಣೆಯಲ್ಲಿರುತ್ತವೆ. ಉಳಿದ 10 ಪ್ರಕರಣಗಳಲ್ಲಿ ವಸೂಲಾತಿ ಪ್ರಕ್ರಿಯೆಯು ಪ್ರಗತಿಯಲ್ಲಿರುತ್ತದೆ. |
| (ಇ) | ಜಾಬ್ ಕಾರ್ಡ್‌ದಾರರು ಕೆಲಸಕ್ಕೆ ಬಂದಿದ್ದರೆಂದು ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಕಾರ್ಡ್‌ದಾರರಿಂದ ಹಣ ವಾಪಸ್ಸು/ಹಂಚಿಕೊಳ್ಳುತ್ತಿರುವುದಕ್ಕೆ ಏನು ಕ್ರಮ ಕೈಗೊಳ್ಳಲಾಗುವುದು; | ಕೇಂದ್ರ ಸರ್ಕಾರವು ನರೇಗಾ ಯೋಜನೆಯ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುವ ಕೂಲಿಕಾರರ ಹಾಜರಾತಿ ಪಡೆಯಲು National Mobile Monitoring System ಎಂಬ ಮೊಬೈಲ್ ಅಪ್ಲಿಕೇಶನ್ ಪರಿಚಯಿಸಿದ್ದು, ದಿನಾಂಕ:01-04-2022 ರಿಂದ ಕೂಲಿಕಾರರ ಹಾಜರಾತಿಯನ್ನು ಈ ಮೊಬೈಲ್ ಅಪ್ಲಿಕೇಶನ್ ಮೂಲಕ ಪಡೆಯುವುದನ್ನು ಕಡ್ಡಾಯಗೊಳಿಸಲಾಗಿದೆ. ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರತಿ ದಿನ ಎರಡು ಬಾರಿ ಕೂಲಿಕಾರರ ಹಾಜರಾತಿ ಪಡೆದು ಜಿಪಿಎಸ್ |

| | | |
|---|---|---|
| | | ಫೋಟೋ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ. ಈ ರೀತಿ ಮೊಬೈಲ್ ಅಪ್ಲಿಕೇಶನ್ ಮೂಲಕ ಪಡೆದ ಹಾಜರಾತಿಯು ನರೇಗಾ ತಂತ್ರಾಂಶಕ್ಕೆ ನೇರವಾಗಿ ಅಪ್‌ಲೋಡ್ ಆಗುತ್ತದೆ ಮತ್ತು ಈ ಹಾಜರಾತಿಯನ್ನು ಆಧರಿಸಿ ಕೂಲಿ ಹಣ ಪಾವತಿಯಾಗುತ್ತದೆ. ಇದರಿಂದಾಗಿ ಯೋಜನೆಯಡಿ ಜಾಬ್‌ಕಾರ್ಡ್ ಹೊಂದಿದ್ದು, ಕೆಲಸಕ್ಕೆ ಹಾಜರಾಗದೇ ಇರುವ ಕೂಲಿಕಾರರು ಕೆಲಸಕ್ಕೆ ಹಾಜರಾಗಿದ್ದಾರೆಂದು ಸುಳ್ಳು ದಾಖಲೆಗಳನ್ನು ಸೃಷ್ಟಿಸಿ, ಹಣ ಪಡೆದುಕೊಳ್ಳಲು ಸಾಧ್ಯವಾಗುವುದಿಲ್ಲ. |
| (ಈ) | ಒಂದೇ ಕಾಮಗಾರಿಯನ್ನು ವಿಂಗಡಿಸಿ ಪ್ರತ್ಯೇಕ ಬಿಲ್ ಮಾಡಿ ನಡೆಯದ ಕಾಮಗಾರಿಗಳ ಹೆಸರಲ್ಲಿ ಹಣ ಪಡೆದಿರುವ ಮಾಹಿತಿ ಸಂಗ್ರಹಿಸಲಾಗಿದೆಯೆ; | ನರೇಗಾ ಯೋಜನೆಯಡಿ ಅನುಷ್ಠಾನಗೊಳಿಸುವ ಎಲ್ಲಾ ಸಮುದಾಯ ಮತ್ತು ವೈಯಕ್ತಿಕ ಕಾಮಗಾರಿಗಳಿಗೆ ನಿಗದಿತ ಅಂದಾಜು ವೆಚ್ಚದ ಮಾದರಿ ಅಂದಾಜು ಪತ್ರಿಕೆಗಳನ್ನು ಸಿದ್ಧಪಡಿಸಿ ಜಿಲ್ಲೆಗಳಿಗೆ ನೀಡಲಾಗಿದೆ. ಇದರಿಂದಾಗಿ ಒಂದೇ ಕಾಮಗಾರಿಯನ್ನು ವಿಂಗಡಿಸಿ ಬಿಲ್ ಮಾಡಲು ಅವಕಾಶ ಇರುವುದಿಲ್ಲ. ಅಂತಹ ಪ್ರಕರಣಗಳು ಕಂಡುಬಂದಲ್ಲಿ ಗುಣ ನಿಯಂತ್ರಕರಿಂದ ಕಾಮಗಾರಿಗಳ ಪರಿಶೀಲನೆ ನಡೆಸಿ, ಹಣ ದುರುಪಯೋಗ ಕಂಡುಬಂದ ಪ್ರಕರಣಗಳಲ್ಲಿ ಸಂಬಂಧಪಟ್ಟ ಅಧಿಕಾರಿ/ಸಿಬ್ಬಂದಿಗಳಿಂದ ವಸೂಲಾತಿ ಮಾಡಲು ಕ್ರಮವಹಿಸಲಾಗಿದೆ. ನರೇಗಾ ಯೋಜನೆಯ ಸಾಮಾಜಿಕ ಪರಿಶೋಧನೆ, ಓಂಬುಡ್ಸ್‌ಮನ್ ತನಿಖೆ ಮತ್ತು ಗುಣ ನಿಯಂತ್ರಕರ ತಪಾಸಣೆಗಳಲ್ಲಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸದೆ ಹಣ ಪಾವತಿಸಿರುವ ಪ್ರಕರಣಗಳು ಕಂಡುಬಂದಲ್ಲಿ ದುರುಪಯೋಗದ ಮೊತ್ತವನ್ನು ಸಂಬಂಧಪಟ್ಟ ಅಧಿಕಾರಿಗಳಿಂದ ವಸೂಲಿ ಮಾಡಲು ಹಾಗೂ ಸಂಬಂಧಪಟ್ಟವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಸೂಚಿಸಲಾಗಿದೆ. |
| (ಉ) | ಸದರಿ ಅವ್ಯವಹಾರಗಳನ್ನು ತಡೆಯಲು ತನಿಖೆ ನಡೆಸಿ ಗ್ರಾಮೀಣ ಭಾಗದ ಬಡವರಿಗೆ ಉದ್ಯೋಗ ಭದ್ರತೆ ನೀಡಲು ಸರ್ಕಾರದಿಂದ ಕೈಗೊಂಡ ಕ್ರಮಗಳೇನು? | ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಅವ್ಯವಹಾರಗಳನ್ನು ತಡೆಗಟ್ಟಲು ಅಳವಡಿಸಿಕೊಳ್ಳಲಾಗಿರುವ ಪಾರದರ್ಶಕ ಕ್ರಮಗಳ ವಿವರ ಈ ಕೆಳಕಂಡಂತಿರುತ್ತವೆ.<br><br>1. ಸಾಮಾಜಿಕ ಪರಿಶೋಧನೆ: ನರೇಗಾ ಯೋಜನೆಯಡಿ ಅನುಷ್ಠಾನಗೊಳಿಸಿದ ಎಲ್ಲಾ ಕಾಮಗಾರಿಗಳನ್ನು ಪ್ರತಿ 06 ತಿಂಗಳಿಗೊಮ್ಮೆ ಸಾಮಾಜಿಕ ಪರಿಶೋಧನೆಗೆ ಒಳಪಡಿಸಲಾಗುತ್ತದೆ. ಸಾಮಾಜಿಕ ಪರಿಶೋಧನೆಯಲ್ಲಿ ಪ್ರತಿಯೊಬ್ಬ ಫಲಾನುಭವಿಯನ್ನು ಭೇಟಿ ಮಾಡಿ ಆತನಿಗೆ ಯೋಜನೆಯ ಸೌಲಭ್ಯ ತಲುಪಿರುವುದನ್ನು ಖಾತ್ರಿ ಪಡಿಸಿಕೊಳ್ಳಲಾಗುತ್ತದೆ. ಯೋಜನೆಯಡಿ ಅನುಷ್ಠಾನಗೊಳಿಸಿದ ಎಲ್ಲಾ ಕಾಮಗಾರಿಗಳನ್ನು ಖುದ್ದಾಗಿ ಸ್ಥಳ ಪರಿಶೀಲನೆ ನಡೆಸಿ ಕಾಮಗಾರಿಯ ಗುಣಮಟ್ಟ ಸೇರಿದಂತೆ ಇತರೆ ಅಂಶಗಳ ಕುರಿತು ಪರಿಶೀಲಿಸಲಾಗುತ್ತದೆ. ಸಾಮಾಜಿಕ ಪರಿಶೋಧನೆಯಲ್ಲಿ ಕಂಡು |

| | | |
|---|---|---|
| | | ಬಂದ ಎಲ್ಲಾ ಅಂಶಗಳನ್ನು ಗ್ರಾಮ ಸಭೆಯ ಮುಂದೆ ಮಂಡಿಸಲಾಗುತ್ತದೆ. ಯೋಜನೆಯ ಅನುಷ್ಠಾನದಲ್ಲಿ ಕಂಡು ಬಂದ ನ್ಯೂನ್ಯತೆಗಳಿಗೆ ಸಂಬಂಧಿಸಿದಂತೆ ಕಾಮಗಾರಿಗಳಿಗೆ ಖರ್ಚು ಮಾಡಿದ ಮೊತ್ತವನ್ನು ಆಕ್ಷೇಪಣೆಯಲ್ಲಿ ಇಡಲಾಗುತ್ತದೆ ಮತ್ತು ಹಣ ದುರುಪಯೋಗ ಪ್ರಕರಣಗಳಲ್ಲಿ ಲೋಪಕ್ಕೆ ಕಾರಣರಾದ ಅಧಿಕಾರಿ/ಸಿಬ್ಬಂದಿಗಳಿಂದ ವಸೂಲಾತಿಗೆ ಸೂಚಿಸಲಾಗುತ್ತದೆ.<br><br>2. ಒಂಬುಡ್ಸ್‌ಮನ್: ನರೇಗಾ ಯೋಜನೆಯ ಅನುಷ್ಠಾನದಲ್ಲಿ ಕಂಡುಬರುವ ಲೋಪದೋಷಗಳು ಮತ್ತು ಮಾರ್ಗಸೂಚಿ ಉಲ್ಲಂಘನೆ ಕುರಿತು ಸಲ್ಲಿಕೆಯಾಗುವ ದೂರುಗಳ ವಿಚಾರಣೆಗೆ ಪ್ರತಿ ಜಿಲ್ಲೆಯಲ್ಲಿ ಒಂಬುಡ್ಸ್ ಮನ್ ನೇಮಕ ಮಾಡಲಾಗಿದೆ. ಒಂಬುಡ್ಸ್ ಮನ್ ರವರು ಯೋಜನೆಯ ಅನುಷ್ಠಾನದ ಕುರಿತು ಸಲ್ಲಿಕೆಯಾಗುವ ದೂರುಗಳ ವಿಚಾರಣೆ ನಡೆಸಿ ದೂರುಪಯೋಗವಾದ ಹಣದ ವಸೂಲಾತಿಗೆ ಮತ್ತು ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮಕ್ಕೆ ಶಿಫಾರಸ್ಸು ಮಾಡುತ್ತಾರೆ. ಒಂಬುಡ್ಸ ಮನ್ ರವರ ಆದೇಶದಂತೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ವಸೂಲಾತಿ ಮತ್ತು ಶಿಸ್ತುಕ್ರಮದ ಪ್ರಕ್ರಿಯೆಗಳನ್ನು ಕೈಗೊಳ್ಳುತ್ತಾರೆ. ಒಂಬುಡ್ಸ್ ಮನ್ ರವರ ಆದೇಶದ ವಿರುದ್ಧ ಮೇಲ್ಮನವಿ ಸಲ್ಲಿಸಲು ರಾಜ್ಯ ಮಟ್ಟದಲ್ಲಿ ಮೂವರು ಸದಸ್ಯರನ್ನೊಳಗೊಂಡ ಮೇಲ್ಮನವಿ ಪ್ರಾಧಿಕಾರ ರಚಿಸಲಾಗಿದ್ದು, ಪ್ರಾಧಿಕಾರದ ಆದೇಶವು ಅಂತಿಮವಾಗಿರುತ್ತದೆ.<br><br>3. ರಾಜ್ಯ ಮತ್ತು ಜಿಲ್ಲಾ ಗುಣ ನಿಯಂತ್ರಕರು: ಯೋಜನೆಯಡಿ ಅನುಷ್ಠಾನಗೊಳಿಸಿದ ಕಾಮಗಾರಿಗಳ ಗುಣಮಟ್ಟ ತಪಾಸಣೆಗಾಗಿ ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಗುಣನಿಯಂತ್ರಕರನ್ನು ನಿಯೋಜಿಸಲಾಗಿದೆ. ಗುಣ ನಿಯಂತ್ರಕರ ವರದಿಗಳನ್ನು ಆಧರಿಸಿ ಕಾಮಗಾರಿಯು ಕಳಪೆ ಎಂದು ಕಂಡುಬಂದ ಸಂದರ್ಭದಲ್ಲಿ ತಪ್ಪಿತಸ್ಥ ಅಧಿಕಾರಿಗಳಿಂದ ದುರುಪಯೋಗದ ಮೊತ್ತವನ್ನು ವಸೂಲಾತಿ ಮಾಡಲು ಕ್ರಮವಹಿಸಲಾಗಿದೆ ಮತ್ತು ಗಂಭೀರ ಪ್ರಕರಣಗಳಲ್ಲಿ ಅನುಷ್ಠಾನ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲಾಗಿದೆ.<br><br>4. **National Mobile Monitoring System** : ಕೇಂದ್ರ ಸರ್ಕಾರವು ನರೇಗಾ ಯೋಜನೆಯ ಕಾಮಗಾರಿಗಳಲ್ಲಿ ಕೆಲಸ |

| | | |
|---|---|---|
| | | ನಿರ್ವಹಿಸುವ ಕೂಲಿಕಾರರ ಹಾಜರಾತಿ ಪಡೆಯಲು National Mobile Monitoring System ಎಂಬ ಮೊಬೈಲ್ ಅಪ್ಲಿಕೇಶನ್ ಪರಿಚಯಿಸಿದ್ದು, ದಿನಾಂಕ:01-04-2022 ರಿಂದ ಕೂಲಿಕಾರರ ಹಾಜರಾತಿಯನ್ನು ಈ ಮೊಬೈಲ್ ಅಪ್ಲಿಕೇಶನ್ ಮೂಲಕ ಪಡೆಯುವುದನ್ನು ಕಡ್ಡಾಯಗೊಳಿಸಲಾಗಿದೆ. ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರತಿದಿನ ಎರಡು ಬಾರಿ ಕೂಲಿಕಾರರ ಹಾಜರಾತಿ ಪಡೆದು ಜಿಪಿಎಸ್ ಫೋಟೋ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ. ಈ ರೀತಿ ಮೊಬೈಲ್ ಅಪ್ಲಿಕೇಶನ್ ಮೂಲಕ ಪಡೆದ ಹಾಜರಾತಿಯು ನರೇಗಾ ತಂತ್ರಾಂಶಕ್ಕೆ ನೇರವಾಗಿ ಅಪ್‌ಲೋಡ್ ಆಗುತ್ತದೆ ಮತ್ತು ಈ ಹಾಜರಾತಿಯನ್ನು ಆಧರಿಸಿ ಕೂಲಿ ಹಣ ಪಾವತಿಯಾಗುತ್ತದೆ.<br><br>5. **Area Officer Mobile App:** ಕೇಂದ್ರ ಸರ್ಕಾರದ ಈ ಮೊಬೈಲ್ ಅಪ್ಲಿಕೇಶನ್ ಮೂಲಕ ರಾಜ್ಯ, ಜಿಲ್ಲೆ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಪ್ರತಿ ತಿಂಗಳು ತಮಗೆ ನಿಗದಿಪಡಿಸಿದ ಸಂಖ್ಯೆಯಷ್ಟು ಕಾಮಗಾರಿಗಳ ಸ್ಥಳ ಪರಿಶೀಲನೆ ನಡೆಸಿ, ವರದಿಗಳನ್ನು ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ ಮತ್ತು ಈ ಕುರಿತು ಪ್ರತಿ ವಾರ ಪ್ರಗತಿ ಪರಿಶೀಲನೆ ನಡೆಸಲಾಗುತ್ತಿದೆ.<br>ಯೋಜನೆಯ ಅನುಷ್ಠಾನದಲ್ಲಿ ಮೇಲ್ಕಂಡ ಪಾರದರ್ಶಕ ಮತ್ತು ಹೊಣೆಗಾರಿಕೆ ಕ್ರಮಗಳ ಮೂಲಕ ಯೋಜನೆಯ ಸೌಲಭ್ಯಗಳನ್ನು ಗ್ರಾಮೀಣ ಜನರಿಗೆ ಪರಿಣಾಮಕಾರಿಯಾಗಿ ಒದಗಿಸಲು ಮತ್ತು ಉದ್ಯೋಗ ಭದ್ರತೆ ನೀಡಲು ಕ್ರಮವಹಿಸಲಾಗಿದೆ. |

ಸಂಖ್ಯೆ: ಗ್ರಾಅಪ 948(17) ಉಖಾಯೋ 2022/953617

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ